ಆ) 2014–15 ನೇ ಸಾಲಿನಲ್ಲಿ 100 ಪಶುವೈದ್ಯ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸಲು ಉದ್ದೇಶಿಸಿದ್ದು, ಅವಶ್ಯಕತೆಗನುಗುಣವಾಗಿ ಪರಿಶೀಲಿಸಲಾಗುವುದು.

ಇ) 2014–15 ನೇ ಸಾಲಿನಲ್ಲಿ 100 ಪಶುವೈದ್ಯ ಸಂಸ್ಥೆಗಳನ್ನು ಪ್ರಾರಂಭಿಸಲು ಉದ್ದೇಶಿಸಿದ್ದು, ಅವಶ್ಯಕತೆಗನುಗುಣವಾಗಿ ಪರಿಶೀಲಿಸಲಾಗುವುದು.

ಪಶು ಆಸ್ಪತ್ರೆಗಳಲ್ಲಿ ಖಾಲಿಯಿರುವ ಹುದ್ದೆಗಳು

1312(1659); ಶ್ರೀ ನಾಗೇಂದ್ರ ಬಿ. (ಕೊಡ್ಲಿಗಿ)

ಅ) ಕೂಡ್ಲಿಗಿ ತಾಲ್ಲೂಕಿನಲ್ಲಿರುವ ಪಶು ಆಸ್ಪತ್ರೆಗಳಲ್ಲಿ ಮಂಜೂರಾದ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳೆಷ್ಟು (ಹುದ್ದೆವಾರು ಸಂಪೂರ್ಣ ವಿವರ ನೀಡುವುದು);

ಆ) ಹಾಗಿದ್ದಲ್ಲಿ, ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಯಾವಾಗ ಕ್ರಮ ಕೈಗೊಳ್ಳಲಾಗುವುದು (ವಿವರ ನೀಡುವುದು)?

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಮತ್ತು ಪಶು ಸಂಗೋಪನಾ ಸಚಿವರು)

ಅ) ಕೂಡ್ಲಿಗಿ ತಾಲ್ಲೂಕಿನ ಪಶು ಆಸ್ಪತ್ರೆಗಳಲ್ಲಿ ಒಟ್ಟು 81 ವಿವಿಧ ಹುದ್ದೆಗಳು ಮಂಜೂರಾಗಿದ್ದು, 54 ಹುದ್ದೆಗಳು ಭರ್ತಿಯಾಗಿದ್ದು, 27 ಹುದ್ದೆಗಳು ಖಾಲಿ ಇರುತ್ತವೆ. ಹುದ್ದೆವಾರು ವಿವರಗಳು ಈ ಕೆಳಕಂಡಂತಿದೆ.

ಹುದ್ದೆಗಳ ವಿವರ	ಮಂಜೂರು	ಭರ್ತಿ	ಖಾಲಿ
ಸಹಾಯಕ ನಿರ್ದೇಶಕರು	2	1	1
ಪಶುವೈದ್ಯಾಧಿಕಾರಿ	16	10	10
ಜಾನುವಾರು ಅಧಿಕಾರಿ	2	0	2
ಹಿರಿಯ ಪಶುವೈದ್ಯಕೀಯ ಪರೀಕ್ಷಕರು	9	9	0
ಪಶುವೈದ್ಯಕೀಯ ಪರೀಕ್ಷಕರು	4	1	3

ದ್ವಿತೀಯ ದರ್ಜೆ ಸಹಾಯಕರು	1	1	0
ವಾಹನ ಚಾಲಕರು	1	0	1
ಡಿ.ದರ್ಜೆ	37	26	11
ಒಟ್ಟು	81	54	27

ಆ) **ಪಶುವೈದ್ಯಾಧಿಕಾರಿಗಳು:** ಪಶುವೈದ್ಯಾಧಿಕಾರಿ ಹುದ್ದೆಗಳಿಗೆ ನೇಮಕ ಮಾಡುವಾಗ ಈ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ಜಾನುವಾರು ಅಧಿಕಾರಿ: ಹಿರಿಯ ಪಶುವೈದ್ಯಕೀಯ ಪರೀಕ್ಷಕರ ಹುದ್ದೆಯಿಂದ ಜಾನುವಾರು ಅಧಿಕಾರಿಗಳ ಹುದ್ದೆಗೆ ಮುಂಬಡ್ತಿ ನೀಡುವ ಸಮಯದಲ್ಲಿ ಭರ್ತಿ ಮಾಡಲಾಗುವುದು.

ಪಶುವೈದ್ಯಕೀಯ ಪರೀಕ್ಷಕರು: ಈ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಹಾಗೂ ಪಶುವೈದ್ಯಕೀಯ ಸಹಾಯಕರ ಹುದ್ದೆಯಿಂದ ಮುಂಬಡ್ತಿ ಮೂಲಕ ಭರ್ತಿ ಮಾಡಲು ಕ್ರಮ ವಹಿಸಲಾಗುವುದು.

ಪಶುವೈದ್ಯಕೀಯ ಸಹಾಯಕರು: 642 ಪಶುವೈದ್ಯಕೀಯ ಸಹಾಯಕರನ್ನು ವಿಶೇಷ ನೇಮಕಾತಿ ಅಡಿಯಲ್ಲಿ ಆಯ್ಕೆ ಮಾಡಿದ್ದು, ನೇಮಕ ಮಾಡಿಕೊಳ್ಳಲಾಗುವುದು.

ವಾಹನ ಚಾಲಕರು:– ನೇರ ನೇಮಕಾತಿ ಮತ್ತು ಮುಂಬಡ್ತಿ ನೀಡುವ ಸಂದರ್ಭದಲ್ಲಿ ಭರ್ತಿ ಮಾಡಲು ಕ್ರಮ ವಹಿಸಲಾಗುವುದು.

ಡಿ–ದರ್ಜೆ: ಖಾಲಿ ಇರುವ ಹುದ್ದೆಗಳಲ್ಲಿ 1500 ಡಿ – ದರ್ಜೆ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.